# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ರಾಜ್ಯದಾದ್ಯಂತ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಇರುವ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಲು ತಾಲ್ಲೂಕು ಮಟ್ಟದಲ್ಲಿ ಮಾಹಿತಿ ಕೇಂದ್ರಗಳನ್ನು ಪ್ರಾರಂಭಿಸುವ ಕುರಿತು.

**ಓದಲಾಗಿದೆ:** 1 2016-17ನೇ ಸಾಲಿನ ಆಯವ್ಯಯ ಭಾಷಣ.

2 ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 400 ಎಂಡಿಎಸ್ 2013 ದಿನಾಂಕ: 07.09.2013.

3 ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ: ಅಸಂನಿ/ಅ.ತಾ.ಮಾ.ಕೇಂ/ಸಿಆರ್-07/2016-17 ದಿನಾಂಕ: 15.04.2016

>>>()<<<

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ 2016-17ನೇ ಸಾಲಿನ ಆಯವ್ಯಯ ಭಾಷಣದ "ಪ್ಯಾರ ಸಂಖ್ಯೆ 212 ರಲ್ಲಿ ರಾಜ್ಯದಾದ್ಯಂತ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಇರುವ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಲು ತಾಲ್ಲೂಕುಮಟ್ಟದಲ್ಲಿ ಮಾಹಿತಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದೆಂದು ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರಾಜ್ಯದ ಪ್ರತಿ ಜಿಲ್ಲಾ ಕೇಂದ್ರ ಸ್ಥಾನ ಹಾಗೂ ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಪ್ರತ್ಯೇಕ ಮಾಹಿತಿ ಕೇಂದ್ರಗಳನ್ನು ತೆರೆದು ತಾಲ್ಲೂಕು ಮಟ್ಟದಲ್ಲಿ ಈ ಬಗ್ಗೆ ನಿಯತಕಾಲದಲ್ಲಿ ಕಾರ್ಯಗಾರವನ್ನು ಹಮ್ಮಿಕೊಳ್ಳುವ ಮೂಲಕ ಪ್ರಚಾರ ಕಾರ್ಯ ಕೈಗೊಳ್ಳುವ ಕಾರ್ಯಕ್ರಮ ಜಾರಿಗೆ ತರಲು ಆದೇಶಿಸಿದೆ.

ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ ರಾಜ್ಯ ಮಟ್ಟದ ಹಾಗೂ ಜಿಲ್ಲಾ ಮಟ್ಟದ ಮಾಹಿತಿ ಕೇಂದ್ರವನ್ನು ಪ್ರಾರಂಭಿಸಿರುವುದನ್ನು ಮುಂದುವರೆಸಿ, ತಾಲ್ಲೂಕು ಮಟ್ಟದಲ್ಲಿ ರಾಜ್ಯದಲ್ಲಿ ಆರ್ಥಿಕವಾಗಿ, ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿರುವ ಮುಸ್ಲಿಂ ಸಮುದಾಯಕ್ಕೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಹಜ್ ಸಮಿತಿ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು ಮತ್ತು ಸರ್ಕಾರೇತರ ಸಂಸ್ಥೆಗಳು ಅನೇಕ ಸವಲತ್ತುಗಳನ್ನು ನೀಡಿದ್ದರೂ ಸಹ ಅರ್ಹ ಫಲಾನುಭವಿಗಳಿಗೆ ಆ ಸವಲತ್ತುಗಳು ಅಗತ್ಯ ಮಾಹಿತಿಯ ಕೊರತೆಯಿಂದ ಸಿಗುತ್ತಿರುವುದಿಲ್ಲ. ಈ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವುದು ಹಾಗೂ ಅಗತ್ಯ ನಿಗಧಿತ ನಮೂನೆಗಳನ್ನು ಒದಗಿಸಲು ರಾಜ್ಯದ ಪ್ರತಿ ತಾಲ್ಲೂಕಿನ ಕೇಂದ್ರ ಸ್ಥಾನಗಳಲ್ಲಿ ಪ್ರತ್ಯೇಕ ಮಾಹಿತಿ ಕೇಂದ್ರಗಳನ್ನು ತೆರೆದು ತಾಲ್ಲೂಕು ಮಟ್ಟದಲ್ಲಿ ಈ ಬಗ್ಗೆ ನಿಯತಕಾಲದಲ್ಲಿ ಕಾರ್ಯಗಾರಗಳನ್ನು ಹಮ್ಮಿಕೊಳ್ಳುವ ಮೂಲಕ ಪ್ರಚಾರ ಕಾರ್ಯ ಕೈಗೊಳ್ಳುವ ಕಾರ್ಯಕ್ರಮ ಜಾರಿಗೆ ತರುವಂತೆ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಏಕಕಡತ ಪದ್ಧತಿಯಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

....2